**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸಿಜೆಎಂ, ರಾಯಚೂರು**
**ಸಿ.ಸಿ. ನಂಬರ. 4173/2024**

**CW-3 / PW-1**

| | | |
|---|---|---|
| ಸಾಕ್ಷಿದಾರನ ಹೆಸರು | : | ನಜೀರಪಾಶಾ |
| ತಂದೆ ಹೆಸರು | : | ಗಫೂರಸಾಬ |
| ವಯಸ್ಸು | : | 50 |
| ಉದ್ಯೋಗ | : | ಚಾಲಕ |
| ವಿಳಾಸ | : | ರಾಯಚೂರು |

**ಮುಖ್ಯ ವಿಚಾರಣೆ ಅಭಿಯೋಜನೆ ಪರ ಮಾನ್ಯ ಹಿರಿಯ ಸ.ಸ.ಅ. ಅವರಿಂದ**

**ಕಲಂ 299 ಸಿ.ಅರ್.ಪಿ.ಸಿ ಅಡಿಯಲ್ಲಿ ಸಾಕ್ಷಿ ವಿಚಾರಣೆ**

**ಪ್ರಮಾಣೀಕರಿಸಿದ ದಿನಾಂಕ : 01-12-2025**

ಚಾಸಾ-2 ರವರ ಪರಿಚಯ ಇಲ್ಲ. ಸಾಕ್ಷಿಗೆ ಒಂದು ದಾಖಲಾತಿ ತೋರಿಸಿದ್ದು ಅದರಲ್ಲಿ ತನ್ನ ಹೆಬ್ಬೆಟ್ಟಿನ ಗುರುತು ನೋಡಿ ಗುರುತಿಸಿದ್ದು. ಸುಮಾರು 1 ವರೆ ವರ್ಷಗಳ ಹಿಂದೆ ಪೊಲೀಸರು ನನ್ನ ಹೆಬ್ಬೆಟ್ಟಿನ ಗುರುತನ್ನು ಪಡೆದಿರುತ್ತಾರೆ. ಅದರಲ್ಲಿ ಬರೆದ ಸಂಗತಿಗಳು ಗೊತ್ತಿಲ್ಲ. ನಾನು ಒಂದು ದಿವಸ ದಾರಿಯಲ್ಲಿ ಹೋಗುತ್ತಿರುವಾಗ ಪೊಲೀಸರು ನನ್ನನ್ನು ಕರೆದು ಭಾವಚಿತ್ರವನ್ನು ತೆಗೆದು ಹೆಬ್ಬೆಟ್ಟಿನ ಗುರುತನ್ನು ಪಡೆದಿರುತ್ತಾರೆ. ಪಂಚನಾಮೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಎರಡು ಭಾವಚಿತ್ರಗಳನ್ನು ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಏನನ್ನು ಮಾಡಿರುವುದಿಲ್ಲ , ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

**( ಈ ಹಂತದಲ್ಲಿ ಮಾನ್ಯ ಹಿರಿಯ ಎಪಿಪಿ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಅನುಮತಿ ಕೋರಿದ್ದರಿಂದ ಅನುಮತಿಯನ್ನು ಕೊಡಲಾಯಿತು.)**

**ಪಾಟೀ ಸವಾಲು : ಮಾನ್ಯ ಹಿರಿಯ ಎಪಿಪಿ ಅವರಿಂದ:**

ದಿನಾಂಕ 18-08-2024 ರಂದು ನನ್ನನ್ನು ಮತ್ತು ಚಾಸಾ-2 ರವರಿಗೆ ಅಬಕಾರಿ ಪೊಲೀಸರು ಗಂಜ್ ಏರಿಯಾದ ಎಪಿಎಂಸಿ ಕಾರ್ಯಾಲಯದ ಮುಂದೆ ಸಾರ್ವಜನಿಕ ಸ್ಥಳದಲ್ಲಿ ನಮ್ಮನ್ನು ಕರೆದುಕೊಂಡು ಹೋಗಿ ಮರೆಯಲ್ಲಿ ನಿಂತು ನೋಡಲಾಗಿ ಕಮಾನ ಮುಂದೆ ಸಾರ್ವಜನಿಕ ಸ್ಥಳದಲ್ಲಿ ಒಬ್ಬ ವ್ಯಕ್ತಿ ಪ್ಲಾಸ್ಟಿಕ ಚೀಲದಲ್ಲಿ ಮದ್ಯದ ಪೌಚಗಳನ್ನು

ಮಾರಾಟ ಮಾಡುತ್ತಿದ್ದನ್ನು ಕಂಡು ದಾಳಿ ಮಾಡಲು ಮದ್ಯದ ಪೌಚಗಳನ್ನು ಖರೀದಿ ಮಾಡಲು ಬಂದಿದ್ದ ಜನರು ಓಡಿ ಹೋಗಿದ್ದರು , ಮದ್ಯ ಮಾರಾಟ ಮಾಡುತ್ತಿದ್ದ ವ್ಯಕ್ತಿ ಸಿಕ್ಕಿಬಿದ್ದಿದ್ದು ಆತನನ್ನು ಹಿಡಿದು ವಿಚಾರಿಸಲಾಗಿ , ಆತನಲ್ಲಿ 90 ಎಂ ಎಲ್ ನ ಒರಿಜಿನಲ್ ಚಾಯ್ಸ ಡಿಲಕ್ಸ ವಿಸ್ಕಿ 42 ಪೌಚಗಳು ಇದ್ದು ಒಟ್ಟು 1678/- ರೂ. ಗಳು ಇದ್ದು ಮದ್ಯ ಮಾರಾಟ ಮಾಡುತ್ತಿದ್ದವನನ್ನು ವಿಚಾರಿಸಲಾಗಿ ಆತನ ಹೆಸರು ರಾಮು ತಂದೆ ಹಣಮಂತು ಮಡ್ಡಿಪೇಟ ರಾಯಚೂರು ಎಂದು ಹೇಳಿದ್ದು , ಸದರಿ ಯವರಿಗೆ ವಿಚಾರಿಸಲಾಗಿ ಯಾವುದೇ ಸಮರ್ಪಕವಾದ ಮಾಹಿತಿ ನೀಡಲಿಲ್ಲ ಮತ್ತು ಮದ್ಯ ಮಾರಾಟ ಮಾಡಲು ಪರವಾನಿಗೆ ಇದೆಯೇ ಎಂದು ಕೇಳಲಾಗಿ , ಯಾವುದೆ ಪರವಾನಿಗೆ ಇರುವುದಿಲ್ಲ ಅನಧಿಕೃತವಾಗಿ ಮಾರಾಟ ಮಾಡುತ್ತಿರುವುದಾಗಿ ಹೇಳಿದ್ದು , ಮದ್ಯದ ಪೌಚಗಳನ್ನು ಪ್ಲಾಸ್ಟಿಕ ಚೀಲ ಸಮೇತ ರಾಸಾಯನಿಕ ಪರೀಕ್ಷೆಗೆ ಕಳುಹಿಸುವ ಕುರಿತು , ಎಲ್ಲಾ ಮದ್ಯದ ಪೌಚಗಳನ್ನು ಒಂದು ಬಿಳಿ ಬಟ್ಟೆಯ ಚೀಲದಲ್ಲಿ ಹಾಕಿ ಬಾಯಿ ಕಟ್ಟಿ ಎಂವೈಪಿಎಸ್ , ರಾಯಚೂರು ಎಂಬ ಇಂಗ್ಲೀಷ ಅಕ್ಷರದಿಂದ ಸೀಲ್ ಮಾಡಿ ಆರೋಪಿತನನ್ನು ವಶಕ್ಕೆ ಪಡೆದುಕೊಂಡು ಬೆಳಿಗ್ಗೆ 8-45 ರಿಂದ 9-45 ರ ವರೆಗೆ ನಮ್ಮ ಸಮಕ್ಷಮ ನಿಪಿ-1 ರಂತೆ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ಮತ್ತು 3 ರಂತೆ  ಎರಡು ಭಾವಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ : ಇರುವುದಿಲ್ಲ.**

**ಮರು ವಿಚಾರಣೆ- ಇಲ್ಲ**

( ತೆರೆದ ನ್ಯಾಯಾಲಯದಲ್ಲಿ ಸಾಕ್ಷ್ಮಿ ಹೇಳಿಕೆಯನ್ನು ನನ್ನ ಉಕ್ತಲೇಖನೆ ಮೇರೆಗೆ ಬೆರಳಚ್ಚುಗಾರರು ಬೆರಳಚ್ಚು ಮಾಡಿರುತ್ತಾರೆ ಮತ್ತು ಅದನ್ನು ಸಾಕ್ಷಿಗೆ ಓದಿ ತಿಳಿಸಿ ಹೇಳಿದಾಗ ಸಾಕ್ಷಿ ಸರಿ ಇದೆ ಅಂತಾ ಒಪ್ಪಿಕೊಂಡಿರುತ್ತಾರೆ.)

**ಪ್ರಧಾನ ಹಿರಿಯ ಸಿ.ಜೆ ಮತ್ತು ಸಿಜೆಎಂ, ರಾಯಚೂರು.**